ಇ) ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನೆಗೆ 3884.25 ಎಕರೆ ಜಮೀನು ಭೂಸ್ವಾಧೀನಪಡಿಸಿಕೊಂಡಿದ್ದು ಹಾಗೂ ಒಟ್ಟು ವೆಚ್ಚ ಸುಮಾರು ರೂ.1411.79 ಕೋಟಿಗಳು. ಗುಲ್ಬರ್ಗಾ ವಿಮಾನ ನಿಲ್ದಾಣ ಯೋಜನೆಗೆ 758 ಎಕರೆ 10 ಗುಂಟೆ ಜಮೀನನ್ನು ಹಾಗೂ ಹಾಸನ ವಿಮಾನ ನಿಲ್ದಾಣಕ್ಕಾಗಿ 400 ಎಕರೆ ಭೂಮಿ ಸ್ವಾಧೀನಪಡಿಸಿಕೊಂಡಿದ್ದು, ಈ ವಿಮಾನ ನಿಲ್ದಾಣಗಳನ್ನು ಭಾರತ ಸರ್ಕಾರದ ವಿಮಾನ ನಿಲ್ದಾಣ ಪ್ರಾಧಿಕಾರ (AAI), ನಿರ್ಮಿಸಿ ಕಾರ್ಯಾಚರಣೆಗೊಳಿಸಿ ಅಭಿವೃದ್ಧಿಪಡಿಸಲು ಅನುವಾಗುವಂತೆ ನಿರ್ಧರಿಸಿ, ರಾಜ್ಯ ಸರ್ಕಾರವು ಪ್ರಸ್ತಾವನೆಯೊಂದನ್ನು ಭಾರತ ಸರ್ಕಾರಕ್ಕೆ ಕಳುಹಿಸಿದ್ದು, ಇದಕ್ಕೆ ಕೇಂದ್ರ ಸರ್ಕಾರದ ಅನುಮೋದನೆ ನಿರೀಕ್ಷಿಸಲಾಗುತ್ತಿದೆ.

135(335) ಶ್ರೀ ಜಿ. ಬಸವಣ್ಣೆಪ್ಪ (ಹೊಳೆಹೊನ್ನೂರು): ಮಾನ್ಯ ಯೋಜನಾ, ಸಣ್ಣ ಉಳಿತಾಯ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಘನತೆವೆತ್ತ ರಾಷ್ಟ್ರಪತಿಗಳು ಕರ್ನಾಟಕ ವಿಧಾನ ಸಭೆಯಲ್ಲಿ ಮಾಡಿದ ಭಾಷಣದ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಸರ್ಕಾರ ರಾಷ್ಟ್ರಪತಿಗಳ ಭಾಷಣವನ್ನು ಕಾರ್ಯರೂಪಕ್ಕೆ ತರಲು ಬದ್ಧವಾಗಿದೆಯೇ?

ಇ) ರಾಷ್ಟ್ರಪತಿಗಳ ಭಾಷಣವನ್ನು ಕಾರ್ಯರೂಪಕ್ಕೆ ತರಲು ಸರ್ಕಾರಕ್ಕೆ ಬೇಕಾಗುವ ಕಾಲಮಿತಿ ಏನು?

ಈ) ಈ ದಿಸೆಯಲ್ಲಿ ಕೇಂದ್ರ ಸರ್ಕಾರದಿಂದ ಸಹಕಾರ ಪಡೆಯಲು ರಾಜ್ಯ ಸರ್ಕಾರ ಪ್ರಯತ್ನಿಸಿದೆಯೇ?

ಶ್ರೀ ರಾಮಚಂದ್ರ ಗೌಡ (ಯೋಜನಾ, ಸಣ್ಣ ಉಳಿತಾಯ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು):

ಅ) ಸರ್ಕಾರವು ಈಗಾಗಲೇ ವಿವಿಧ ಕಾರ್ಯಕ್ರಮಗಳ ಬಗ್ಗೆ ಕಾರ್ಯ ಯೋಜನೆಗಳನ್ನು ರೂಪಿಸಲು ಉದ್ದೇಶಿಸಿದ್ದು, 2006–07ನೇ ಸಾಲಿನ ಆಯವ್ಯಯದಲ್ಲಿ ನಗರ ಮಟ್ಟದ ಸೌಲಭ್ಯಗಳನ್ನು ಹಳ್ಳಿಗಳಿಗೆ ವಿಸ್ತರಿಸುವುದು (ಪುರ), ವಿ–ಆಡಳಿತಕ್ಕೆ ಸಂಬಂಧಿಸಿದಂತೆ GRID ಆಧಾರಿತ ವಿದ್ಯುನ್ಮಾನ ಸಂಪರ್ಕ ಕಲ್ಪಿಸುವುದು, ಜೈವಿಕ ಇಂಧನ ತಯಾರಿಕೆ ಮುಂತಾದವುಗಳಿಗೆ ಒತ್ತು ನೀಡಲಾಗಿದೆ. ಇತರೆ ಕಾರ್ಯಕ್ರಮಗಳನ್ನು ಸಹ ಹೊಸ ತಂತ್ರ ಹಾಗೂ ಪ್ರಸ್ತುತ ನೀತಿ ಮಾರ್ಪಾಟುಗಳೊಂದಿಗೆ, ಕ್ರಿಯಾ ಯೋಜನೆಗಳನ್ನು ರೂಪಿಸುವತ್ತ ಗಮನಹರಿಸಲಾಗಿದೆ. ಸಾಧ್ಯವಿರುವ ಕ್ಷೇತ್ರಗಳಿಗೆ ಖಾಸಗಿ ಹಾಗೂ ಸಾರ್ವಜನಿಕ ವಲಯಗಳ ಭಾಗವಹಿಸುವಿಕೆಗೆ ಪ್ರೋತ್ಸಾಹಿಸಲಾಗುವುದು.

ಆ) ಹೌದು.

ಇ) ಪ್ರಸ್ತಾವಿಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸರ್ಕಾರವು ಯಾವುದೇ ಕಾಲಮಿತಿ ನಿಗದಿ ಮಾಡಿರುವುದಿಲ್ಲ. ಆದಾಗ್ಯೂ ಈ ಕಾರ್ಯಕ್ರಮಗಳನ್ನು ನಿರ್ದಿಷ್ಟ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲು ಸೂಕ್ತಕ್ರಮ ತೆಗೆದುಕೊಳ್ಳಲಾಗುವುದು.

ಈ) ಈಗಾಗಲೇ ಕೆಲವು ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದ ಸಂಬಂಧಪಟ್ಟ ಇಲಾಖೆಗಳಿಂದ, ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳ ಮೂಲಕ ನೆರವು ದೊರೆಯುತ್ತಲಿದೆ.

12ನೇ ಆರ್ಥಿಕ ಆಯೋಗದಲ್ಲಿ ಲಭ್ಯವಾಗಲಿರುವ ಅನುದಾನ ಹಾಗೂ ರಾಷ್ಟ್ರೀಯ ವಿ-ಆಡಳಿತ ನಿಧಿಯಿಂದ ರಾಜ್ಯಕ್ಕೆ ಲಭ್ಯವಾಗಲಿರುವ ಹಣವನ್ನು ಸಹ ಉಪಯೋಗಿಸಿ ಕೊಳ್ಳಲಾಗುವುದು.

ಆದಾಗ್ಯೂ ಪ್ರಸ್ತಾವಿಕ ಕಾರ್ಯಕ್ರಮಗಳಿಗೆ ಹೆಚ್ಚಿನ ಕೇಂದ್ರ ಸಹಾಯಧನ ದೊರೆಯುವಂತೆ ಪ್ರಯತ್ನಿಸಲಾಗುವುದು.

136(353) ಶ್ರೀ ಬೋಪಯ್ಯ ಕೆ.ಜಿ. (ಮಡಿಕೇರಿ): ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಗ್ರಾಮದಿಂದ ಗ್ರಾಮಕ್ಕೆ ಹಾಲಿ ಇರುವ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿ ಮತ್ತು ದುರಸ್ತಿಪಡಿಸಲು ಅರಣ್ಯ ಇಲಾಖೆ ಅಡ್ಡಿಪಡಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅದೇ ರೀತಿ ಗ್ರಾಮೀಣ ಪ್ರದೇಶಗಳಿಗೆ ವಿದ್ಯುತ್ ದೂರವಾಣಿ ಸಂಪರ್ಕ ಮತ್ತು ಕುಡಿಯುವ ನೀರಿಗಾಗಿ ಪೈಪ್ ಅಳವಡಿಸಲು ಅರಣ್ಯ ಇಲಾಖೆ ಅಡ್ಡಿಪಡಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಸಿ ಚನ್ನಿಗಪ್ಪ (ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು):

ಅ) ಕೊಡಗು ಜಿಲ್ಲೆಯ ಮಡಿಕೇರಿ ವಿಭಾಗದ ವ್ಯಾಪ್ತಿಯಲ್ಲಿಯ ಮೀಸಲು ಅರಣ್ಯದ ಮಧ್ಯದಲ್ಲಿ ಸಾರ್ವಜನಿಕರು ಓಡಾಡುವ ಸಲುವಾಗಿ ಅನಧಿಕೃತ ರಸ್ತೆಗಳು ಹಾಲಿ ಇರುತ್ತದೆ. ಈ ರಸ್ತೆಯನ್ನು ಉಪಯೋಗಿಸಲು ಇಲಾಖಾ ವತಿಯಿಂದ ಯಾವುದೇ ರೀತಿಯ ತೊಂದರೆ ಉಂಟು ಮಾಡುತ್ತಿಲ್ಲ. ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅರಣ್ಯ ಭೂಮಿಯಲ್ಲಿರುವ ರಸ್ತೆಯನ್ನು ಅಗಲೀಕರಣಗೊಳಿಸಲು ಹಾಗೂ ಇದಕ್ಕಾಗಿ ಮರಗಳನ್ನು ಕಡಿಯಲು ಕೇಂದ್ರ ಸರ್ಕಾರದ ಪೂರ್ವಾನುಮತಿಯು ಅವಶ್ಯಕವಾಗಿರುತ್ತದೆ. ಈ ಕಾರಣದಿಂದಾಗಿ ಈ ವಿಭಾಗದ ವ್ಯಾಪ್ತಿಯ ಸಂಪಾಜೆ ವಲಯದ ಬಾಲಂಬಿಯಿಂದ ದಬ್ಬಡಕ್ಕೆ ಹೋಗುವ ರಸ್ತೆಯ ಎರಡೂ ಬದಿ ಮರಗಳನ್ನು ಕಡಿದು ರಸ್ತೆ ಅಗಲೀಕರಿಸುತ್ತಿದ್ದಾಗ ಸ್ಥಳಕ್ಕೆ ಹೋಗಿ ಸದರಿ ಕೆಲಸವನ್ನು ಸ್ಥಗಿತಗೊಳಿಸಲಾಗಿರುತ್ತದೆ. ಈ ವಿಚಾರವು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಇಂತಹ ಪ್ರಕರಣಗಳು ಇರುವುದಿಲ್ಲ.

ಇ) 1980ರ ಅರಣ್ಯ ಸಂರಕ್ಷಣಾ ಕಾಯಿದೆ ಅನುಸಾರ ಅರಣ್ಯ ಪ್ರದೇಶಗಳಲ್ಲಿ ಅರಣ್ಯೇತರ ಚಟುವಟಿಕೆಗೆ ಕೇಂದ್ರ ಸರ್ಕಾರದ ಪೂರ್ವಾನುಮತಿ ಅವಶ್ಯಕತೆ ಇರುತ್ತದೆ. ಆದರೆ ದಿನಾಂಕ: 3-1-2005ರ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ 1 ಹೆಕ್ಟೇರ್‌ಗಿಂತ ಕಡಿಮೆ ಇರುವ ಅರಣ್ಯ ಪ್ರದೇಶವನ್ನು ಕೆಳಕಂಡ ಅರಣ್ಯೇತರ ಉದ್ದೇಶಕ್ಕಾಗಿ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ಇಲಾಖೆಗಳಿಗೆ ನೀಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿರುತ್ತದೆ.

1) ಶಾಲೆಗಳು

2) ಚಿಕಿತ್ಸಾಲಯ/ಆಸ್ಪತ್ರೆ

3) ವಿದ್ಯುತ್ ಮತ್ತು ಟೆಲಿಕಮ್ಯುನಿಕೇಷನ್ ಲೈನ್‌ಗಳು.